# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 626
ಸದಸ್ಯರ ಹೆಸರು : ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 12.07.2023
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳ ಸುತ್ತಲಿನ ಹಾಗೂ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿರುವ ಹಲವು ಗೋಮಾಳ ಮತ್ತು ಸರ್ಕಾರಿ ಜಮೀನುಗಳು ಖಾಸಗಿಯವರಿಂದ ಅತಿಕ್ರಮಗೊಳಿಸಲ್ಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಜಮೀನುಗಳ ವಿಸ್ತೀರ್ಣ ಎಷ್ಟು; (ಸಂಪೂರ್ಣ ವಿವರಗಳನ್ನು ಒದಗಿಸುವುದು) | ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳ ಸುತ್ತಲಿನ ಹಾಗೂ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿರುವ ಹಲವು ಗೋಮಾಳ ಮತ್ತು ಸರ್ಕಾರಿ ಜಮೀನುಗಳು ಖಾಸಗಿಯವರಿಂದ ಅತಿಕ್ರಮಗೊಳಿಸಲ್ಪಟ್ಟಿರುವ ಪ್ರಕರಣಗಳ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| ಆ) | ಅತಿಕ್ರಮಿಸಲ್ಪಟ್ಟಿರುವ ಜಮೀನುಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ಸರ್ಕಾರದಿಂದ ಎಷ್ಟು ವಿಸ್ತೀರ್ಣದ ಜಮೀನನ್ನು ವಶಕ್ಕೆ ಪಡೆಯಲಾಗಿದೆ; (ವಿವರ ನೀಡುವುದು) | ಅತಿಕ್ರಮಿಸಲ್ಪಟ್ಟಿರುವ ಜಮೀನುಗಳ ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ. |
| ಇ) | ಅತಿಕ್ರಮಿಸಲ್ಪಟ್ಟ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಸರ್ಕಾರಕ್ಕಿರುವ ತೊಡಕುಗಳೇನು? | ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಅತಿಕ್ರಮಿಸಲ್ಪಟ್ಟ ಜಮೀನಗಳಲ್ಲಿ ನಮೂನೆ-50 & 53 ಕಲಂ 94ಸಿ ರಲ್ಲಿ ಅರ್ಜಿಗಳನ್ನು ಸಲ್ಲಿಸಿರುವುದರಿಂದ ಮತ್ತು ನ್ಯಾಯಾಲಯಗಳಲ್ಲಿ ಪ್ರಕರಣಗಳು ದಾಖಲಾಗಿರುವುದರಿಂದ ಅಂತಹ ಜಮೀನುಗಳನ್ನು ಹೊರತುಪಡಿಸಿ ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ.<br><br>ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳನ್ನು ಕೂಡಲೇ ತೆರವುಗೊಳಿಸುವಂತೆ ಹಾಗೂ ಕಬಳಿಕೆಯಾಗಿರುವ ಸರ್ಕಾರಿ ಜಮೀನುಗಳನ್ನು ಹಿಂಪಡೆಯುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 20 ಎಲ್.ಜಿ.ಪಿ. 2020, ದಿನಾಂಕ: 20.01.2020ರನ್ವಯ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿದೆ. (ಪ್ರತಿಯನ್ನು ಅನುಬಂಧ-3ರಲ್ಲಿ ನೀಡಲಾಗಿದೆ).<br><br>ಸರ್ಕಾರಿ ಜಮೀನಿನಲ್ಲಿನ ಒತ್ತುವರಿಯನ್ನು ತೆರವುಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 104ರಡಿ ಒತ್ತುವರಿದಾರರಿಗೆ ನೋಟೀಸ್ ನೀಡಿ ವಿಚಾರಣೆ ನಡೆಸಿ, ಸರ್ಕಾರದ ವಶಕ್ಕೆ ಪಡೆಯಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| | | ಸರ್ಕಾರಿ ಜಮೀನಿನಲ್ಲಿ ಅಕ್ರಮ/ಅನಧಿಕೃತವಾಗಿ ಭೂ ಸ್ವಾಧೀನ ಹೊಂದಿರುವ ವ್ಯಕ್ತಿಗಳ ವಿರುದ್ಧ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 192(ಎ)ರಡಿ ಪ್ರಕರಣಗಳನ್ನು ದಾಖಲಿಸಿ ಒತ್ತುವರಿಯನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಪ್ರಕರಣವನು ದಾಖಲಿಸಿ ಒತ್ತುವರಿಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಸರ್ಕಾರಿ ಜಮೀನಿನ ಒತ್ತುವರಿಯನು ತೆರವುಗೊಳಿಸಲು ರಾಜ್ಯ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯನು ರೂಪಿಸಲಾಗಿದೆ. ಅದರಂತೆ, ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆಯನು ಸಿದ್ಧಪಡಿಸಿಕೊಂಡು ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಒತ್ತುವರಿಯನು ತೆರವುಗೊಳಿಸಿದ ಜಮೀನುಗಳನ್ನು ಸಂರಕ್ಷಿಸಲು ಜಮೀನಿನ ಸುತ್ತಲು ಟ್ರೆಂಚ್ ತೆಗೆದು, ತಂತಿಬೇಲಿ ನಿರ್ಮಿಸಿ ತೆರವುಗೊಳಿಸಿದ ಜಮೀನಿನಲ್ಲಿ ನಾಮಫಲಕ ಅಳವಡಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 81 ಎಲ್‌ಜಿಕ್ಯೂ 2023

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

| ಅನುಬಂಧ-01 | | | | |
|---|---|---|---|---|
| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ಪ್ರಕರಣಗಳು | ಪ್ರಕರಣಗಳ ವಿಸ್ತೀರ್ಣ (ಎ-ಗುಂ) |
| 1 | ಬೆಂಗಳೂರು ನಗರ | ಬೆಂ. ದಕ್ಷಿಣ | 6759 | 8090-04.15 |
| | | ಬೆಂ. ಉತ್ತರ | 660 | 3086-30.15 |
| | | ಆನೇಕಲ್ | 1226 | 10531-22.09 |
| | | ಬೆಂ. ಪೂರ್ವ | 4762 | 4475-07.10 |
| | | ಯಲಹಂಕ | 1253 | 12764-05.00 |
| | | **ಒಟ್ಟು** | **14660** | **38947-31.01** |
| | | | | |
| 2 | ಬೆಂಗಳೂರು ಗ್ರಾಮಾಂತರ | ನೆಲಮಂಗಲ | 61 | 247-37 |
| | | ದೊಡ್ಡಬಳ್ಳಾಪುರ | 81 | 56-02 |
| | | ದೇವನಹಳ್ಳಿ | 303 | 289-14 |
| | | ಹೊಸಕೋಟೆ | 847 | 3304-35 |
| | | **ಒಟ್ಟು** | **1292** | **3898-08** |

ಪ್ರಧಾನ ವ್ಯವಸ್ಥಾಪಕರು
ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿ.

7/7/23

## ಅನುಬಂಧ-02

| ಕ್ರ. ಸಂ. | ಜಿಲ್ಲೆ | ತಾಲ್ಲೂಕು | ಪ್ರಕರಣಗಳು | ಪ್ರಕರಣಗಳ ವಿಸ್ತೀರ್ಣ (ಎ-ಗುಂ) |
|---|---|---|---|---|
| 1 | ಬೆಂಗಳೂರು ನಗರ | ಬೆಂ. ದಕ್ಷಿಣ | 2023 | 3399-16.00 |
| | | ಬೆಂ. ಉತ್ತರ | 310 | 2304-17.00 |
| | | ಆನೇಕಲ್ | 762 | 4138-21.14 |
| | | ಬೆಂ. ಪೂರ್ವ | 1467 | 3144-21.15 |
| | | ಯಲಹಂಕ | 312 | 3500-06.00 |
| | | **ಒಟ್ಟು** | **1292** | **3898-08** |
| | | | | |
| 2 | ಬೆಂಗಳೂರು ಗ್ರಾಮಾಂತರ | ನೆಲಮಂಗಲ | 22 | 68-12 |
| | | ದೊಡ್ಡಬಳ್ಳಾಪುರ | 23 | 16-02 |
| | | ದೇವನಹಳ್ಳಿ | 81 | 51-09 |
| | | ಹೊಸಕೋಟೆ | 250 | 3114-06 |
| | | **ಒಟ್ಟು** | **376** | **3249-29** |

ಪ್ರಧಾನ ವ್ಯವಸ್ಥಾಪಕರು
ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿ.
7/7/17

ಅನುಬಂಧ-3

ಕರ್ನಾಟಕ ಸರ್ಕಾರ

ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:20-01-2020

## ಸುತ್ತೋಲೆ

ವಿಷಯ: ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು, ಹಾಗೂ ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡುವ/ ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾದ ಅಧಿಕಾರಿ/ಸಿಬ್ಬಂಧಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸುವ ಕುರಿತು.

ಉಲ್ಲೇಖ:
1. ಭಾರತದ ಲೆಕ್ಕನಿಯಂತರಕರು ಮತ್ತು ಮಹಾಲೆಕ್ಕಪರಿಶೋಧಕರು ಸಲ್ಲಿಸಿರುವ ವರದಿ ಸಂಖ್ಯೆ: 05/2018 - ಸರ್ಕಾರಿ ಭೂಮಿ ಮಂಜೂರಾತಿ, ಗುತ್ತಿಗೆ, ಒತ್ತುವರಿಗಳ ತೆರವುಗೊಳಿಸುವಿಕೆ ಹಾಗೂ ಅಕ್ರಮ ಹಿಡುವಳಿಗಳನ್ನು ಸಕ್ರಮಗೊಳಿಸುವಿಕೆ ಬಗ್ಗೆ.
2. ಮಾನ್ಯ ಕರ್ನಾಟಕ ವಿಧಾನ ಮಂಡಲದ 2019-20ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ ಸಭೆಯಲ್ಲಿ ದಿನಾಂಕ: 07.01.2020, 14.01.2020ರಂದು ಚರ್ಚಿಸಲ್ಪಟ್ಟಿರುವ ಅಂಶಗಳು.
3. ಸರ್ಕಾರದ ಸುತ್ತೋಲೆ ಕ್ರಮಾಂಕ: ಆರ್‌ಡಿ/155/ಎಲ್‌ಜಿಎಕ್ಸ್/2013, ದಿನಾಂಕ: 23.12.2013-ಒತ್ತುವರಿ ತೆರವುಗೊಳಿಸಲು ಕಾಲಬದ್ಧ ಕ್ರಿಯಾ ಯೋಜನೆ.
4. ಸರ್ಕಾರದ ಆದೇಶ ಕ್ರಮಾಂಕ: ಆರ್‌ಡಿ/155/ಎಲ್‌ಜಿಎಕ್ಸ್/2013, ದಿನಾಂಕ: 19.08.2014-ಜಿಲ್ಲಾ ಮಟ್ಟದ ಕಾರ್ಯಪಡೆಗಳ ರಚನೆ.
5. ಸರ್ಕಾರದ ಸುತ್ತೋಲೆ ಕ್ರಮಾಂಕ: ಆರ್‌ಡಿ/61/ಎಲ್‌ಜಿಪಿ/2017, ದಿನಾಂಕ: 02/02/2019 ಒತ್ತುವರಿದಾರರಿಂದ ದಂಡ ವಸೂಲು ಮಾಡುವ ಕುರಿತು.

*****

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ಸರ್ಕಾರಿ ಭೂಮಿ ಮಂಜೂರಾತಿ, ಗುತ್ತಿಗೆ, ಒತ್ತುವರಿಗಳ ತೆರವುಗೊಳಿಸುವಿಕೆ ಹಾಗೂ ಅಕ್ರಮ ಹಿಡುವಳಿಗಳನ್ನು ಸಕ್ರಮಗೊಳಿಸುವಿಕೆ ಕುರಿತು ವರದಿ ಸಂಖ್ಯೆ: 05/2018 ಸಲ್ಲಿಸಿರುತ್ತಾರೆ. ಸದರಿ ವರದಿಯ ಬಗ್ಗೆ ಕರ್ನಾಟಕ ವಿಧಾನ ಮಂಡಲದ 2019-20ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯು ದಿನಾಂಕ: 07.01.2020 ಮತ್ತು 14.01.2020ರಂದು ಸಭೆ ನಡೆಸಿದ್ದು, ಕಬಳಿಕೆಯಾಗಿರುವ ಸರ್ಕಾರಿ ಜಮೀನುಗಳನ್ನು ಹಿಂಪಡೆಯುವ ಪ್ರಕ್ರಿಯೆ ಮಂದ ಗತಿಯಲ್ಲಿಯಲ್ಲಿರುವುದು, ಭೂ ಕಬಳಿಕೆದಾರರು ಹಾಗೂ ದುಷ್ಪ್ರೇರಣೆ ನೀಡಿದವರ ವಿರುದ್ಧ ಕಠಿಣ ಕ್ರಮಗಳಾಗದೇ ಇರುವುದನ್ನು ಗಂಭೀರವಾಗಿ ಪರಿಗಣಿಸಿರುತ್ತದೆ.

ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಕಲಂ 192 ಎ, 192 ಬಿ ಹಾಗೂ 192 ಸಿ ಅಡಿಯಲ್ಲಿ ಸರ್ಕಾರಿ ಸ್ವತ್ತು ಅತಿಕ್ರಮಣ ಮಾಡುವುದು, ಸರ್ಕಾರಿ ಸ್ವತ್ತನ್ನು ಕಬಳಿಸುವ ಉದ್ದೇಶದಿಂದ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸುವುದು, ಒತ್ತುವರಿ ತೆರವು ಮತ್ತಿತರ ಕಾರ್ಯಗಳನ್ನು ನಿರ್ವಹಿಸಲು ಅಧಿಕೃತ ಕಂದಾಯ ಅಧಿಕಾರಿ ವಿಫಲನಾಗುವುದು, ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡುವುದು ಮುಂತಾದ ಅಪರಾಧಗಳಿಗಾಗಿ 3 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲು ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗಿದೆ.

ಸರ್ಕಾರಿ ಜಮೀನು ಒತ್ತುವರಿ ತೆರವು ಪ್ರಕ್ರಿಯೆಯನ್ನು ಪರಿಣಾಮಕಾರಿಯಾಗಿ ಕಾರ್ಯರೂಪಕ್ಕೆ ತರುವ ನಿಟ್ಟಿನಲ್ಲಿ ಸರ್ಕಾರವು ಉಲ್ಲೇಖ(3)ರ ಸುತ್ತೋಲೆಯಲ್ಲಿ 10 ಸೂಚನೆಗಳನ್ನು ನೀಡಿರುತ್ತದೆ. ತದನಂತರ ಸರ್ಕಾರಿ ಜಮೀನು ಒತ್ತುವರಿ ಪ್ರಕ್ರಿಯೆಯನ್ನು ತೀವ್ರಗೊಳಿಸುವ ಸಲುವಾಗಿ ಸರ್ಕಾರವು ಉಲ್ಲೇಖ(4)ರ ಆದೇಶದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಕಾರ್ಯಪಡೆಗಳನ್ನು ರಚಿಸಿ, ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸೂಚನೆಗಳನ್ನು ನೀಡಲಾಗಿರುತ್ತದೆ. ಮುಂದುವರೆದು, ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ರ ಅನ್ವಯ ಒತ್ತುವರಿಯಾಗಿರುವ ಸರ್ಕಾರಿ ಜಮೀನನ್ನು ತೆರವುಗೊಳಿಸಿರುವ ಪ್ರಕರಣಗಳಲ್ಲಿ ಒತ್ತುವರಿದಾರರಿಂದ ದಂಡ ವಸೂಲು ಮಾಡುವ ಬಗ್ಗೆ ಸರ್ಕಾರವು ಉಲ್ಲೇಖ(5)ರ ಸುತ್ತೋಲೆಯಲ್ಲಿ ವಿವರವಾದ ಸೂಚನೆಗಳನ್ನು ನೀಡಲಾಗಿರುತ್ತದೆ

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ಸಲ್ಲಿಸಿರುವ ವರದಿ ಸಂಖ್ಯೆ: 05/2018ರ ಬಗ್ಗೆ ಕರ್ನಾಟಕ ವಿಧಾನ ಮಂಡಲದ 2019-20ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯು ಸಭೆಗಳಲ್ಲಿ ಕಬಳಿಕೆಯಾಗಿರುವ ಸರ್ಕಾರಿ ಜಮೀನುಗಳನ್ನು ಹಿಂಪಡೆಯುವ ಪ್ರಕ್ರಿಯೆ ಮಂದ ಗತಿಯಲ್ಲಿಯಲ್ಲಿರುವುದು, ಅನಧಿಕೃತ ಒತ್ತುವರಿದಾರರ ವಿರುದ್ಧ ನಿರೀಕ್ಷಿತ ಮಟ್ಟದಲ್ಲಿ ಕ್ರಮವಾಗದಿರುವುದನ್ನು, ಅಕ್ರಮ/ಸುಳ್ಳು ದಾಖಲೆಗಳ ಆಧಾರದ ಮೇಲೆ ಭೂ ಕಬಳಿಕೆ ಮಾಡಿರುವವರು ಹಾಗೂ ಅಕ್ರಮ ದಾಖಲೆಗಳನ್ನು ಸೃಷ್ಟಿಸಿಕೊಟ್ಟವರ ವಿರುದ್ಧ ಕ್ರಮ ಜರುಗಿಸದೇ ಇರುವುದರಿಂದ ಕೋಟ್ಯಾಂತರ ರೂಪಾಯಿ ಮೌಲ್ಯದ ಸರ್ಕಾರಿ/ಸಾರ್ವಜನಿಕ ಜಮೀನುಗಳು ಸರ್ಕಾರದ ಕೈತಪ್ಪಿ ಹೋಗಿರುವುದೇ ಅಲ್ಲದೆ, ಭೂ ಕಬಳಿಕೆದಾರರು ಕಾನೂನಿನ ಹಿಡಿತದಿಂದ ನುಣುಚಿಕೊಂಡು ಹೋಗುತ್ತಿರುವ ಅಂಶವನ್ನು ಗಂಭೀರವಾಗಿ ಪರಿಗಣಿಸಲಾಗಿದೆ

ಆದ್ದರಿಂದ, ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸಲು ಹಾಗೂ ಕಬಳಿಕೆಯಾಗಿರುವ ಸರ್ಕಾರಿ ಸ್ವತ್ತುಗಳನ್ನು ಹಿಂಪಡೆಯಲು ಎಲ್ಲಾ ಜಿಲ್ಲಾಧಿಕಾರಿಗಳು ಈ ಕೆಳಕಂಡಂತೆ ತುರ್ತು ಕ್ರಮವಹಿಸತಕ್ಕದ್ದು

i. ಜಿಲ್ಲಾಧಿಕಾರಿಗಳು ಒತ್ತುವರಿ ತೆರವುಗೊಳಿಸಲು ಬಾಕಿ ಇರುವ ಪ್ರಕರಣಗಳು ಹಾಗೂ ಇದುವರೆಗೆ ಸ್ವೀಕೃತವಾಗಿರುವ ದೂರುಗಳನ್ನು ಇನ್ನು 15 ದಿನಗಳ ಅವಧಿಯೊಳಗೆ ಸಂಪೂರ್ಣವಾಗಿ ಪರಾಮರ್ಶಿಸುವುದು

2. ನಗರ ಪ್ರದೇಶ/ ವಾಣಿಜ್ಯ/ಕೈಗಾರಿಕೆ/ಇನ್ನಿತರ ಉದ್ದಿಮೆಗಳಿಗೆ ಅನಧಿಕೃತವಾಗಿ ಸರ್ಕಾರಿ ಜಮೀನು ಬಳಸಿರುವ ಒತ್ತುವರಿ ಪ್ರಕರಣಗಳನ್ನು ಅತಿ ಗಂಭೀರ ಎಂದು ಪರಿಗಣಿಸಿ ಒತ್ತುವರಿದಾರರ ವಿರುದ್ಧ ಕಾನೂನಾತ್ಮಕ ಕ್ರಮಗಳನ್ನು ಜರುಗಿಸುವುದು

3 ಜಿಲ್ಲಾಧಿಕಾರಿಗಳು ನಿಗದಿಪಡಿಸುವ ಗುರಿ ಮತ್ತು ಕಾಲಮಿತಿಯಲ್ಲಿ ಕ್ರಮ ಜರುಗಿಸದೇ ಇರುವುದು, ನಿರ್ಲಕ್ಷತನ ತೋರಿಸುವುದು, ವಿಳಂಬ ನೀತಿ ಅನುಸರಿಸುವುದು, ಒತ್ತುವರಿ

ತೆರವುಗೊಳಿಸಲು ವಿಫಲರಾದ ಅಧಿಕಾರಿ, ಸಿಬ್ಬಂಧಿಗಳನ್ನು ಗುರುತಿಸಿ ಅವರುಗಳ ವಿರುದ್ಧ ಕಲಂ 192ಎ/192ಬಿ ಅನ್ವಯ ತಪ್ಪದೇ ಕ್ರಮ ಜರುಗಿಸುವುದಲ್ಲದೆ, ತಕ್ಷಣವೇ ಇಲಾಖೆ ವತಿಯಿಂದ ಶಿಸ್ತು ಕ್ರಮಗಳನ್ನು ಜರುಗಿಸತಕ್ಕದ್ದು. ಹಾಗೆಯೇ ಸದರಿ ಒತ್ತುವರಿ ತೆರವುಗೊಳಿಸಲು ಪರ್ಯಾಯ ವ್ಯವಸ್ಥೆಯನ್ನು ಸಹ ಮಾಡುವುದು.

4. ನಕಲಿ ದಾಖಲೆಗಳ ಆಧಾರದ ಮೇಲೆ ಭೂ ಕಬಳಿಕೆಯಾಗಿದೆಯೆಂದು ಬಂದಿರುವ ದೂರು ಅಥವಾ ಸ್ವತ: ಗಮನಿಸಿರುವ ಪ್ರಕರಣಗಳನ್ನು ತೀರ್ಮಾನಿಸಲು ನಿರ್ದಿಷ್ಟ ಕಾಲಮಿತಿ ನಿಗದಿಪಡಿಸುವುದು, ಇಂತಹ ಪ್ರಕರಣಗಳನ್ನು ಪ್ರತ್ಯೇಕವಾಗಿ ಪರಾರ್ಶಿಸುವುದು.

5. ನಕಲಿ ದಾಖಲೆಗಳನ್ನು ಸೃಷ್ಟಿಸುವಲ್ಲಿ ಸರ್ಕಾರಿ ಅಧಿಕಾರಿ/ಸಿಬ್ಬಂಧಿಗಳು ಶಾಮೀಲಾಗಿರುವ ಬಗ್ಗೆ ಮೇಲ್ನೋಟಕ್ಕೆ ಕಂಡು ಬಂದಲ್ಲಿ ಕೂಡಲೇ ಅಂತಹವರನ್ನು ಸೇವೆಯಿಂದ ಅಮಾನತ್ತಿನಲ್ಲಿಡಲು ಕ್ರಮ ಜರುಗಿಸುವುದು.

6. ನಕಲಿ ದಾಖಲೆಗಳನ್ನು ಸೃಷ್ಟಿಸಿಕೊಟ್ಟಿರುವುದು ಸಾಬೀತು ಆದಲ್ಲಿ ತಕ್ಷಣವೇ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ಹೂಡುವುದು.

7. ನ್ಯಾಯಾಲಯ ತಡೆಯಾಜ್ಞೆ ಜಾರಿಯಲ್ಲಿ ಇದ್ದಲ್ಲಿ, ತಡೆಯಾಜ್ಞೆ ತೆರವು ಮಾಡಿಸಲು ತಕ್ಷಣವೇ ಕ್ರಮ ಜರುಗಿಸುವುದು ಹಾಗೂ ಪ್ರಕರಣದ ಶೀಘ್ರ ಇತ್ಯರ್ಥಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದು.

8. ಸರ್ಕಾರಿ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ದಾಖಲಾಗಿರುವ ನ್ಯಾಯಾಲಯ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ಕ್ಷೇತ್ರ ಮಟ್ಟದ ಅಧಿಕಾರಿಗಳು ನಿರ್ವಹಿಸುವುದನ್ನು ಖಚಿತಪಡಿಸಿ ಕೊಳ್ಳುವುದು.

9. ಸರ್ಕಾರದ ಹಿತಾಸಕ್ತಿಗೆ ವಿರುದ್ಧವಾಗಿ ನ್ಯಾಯಾಲಯದ ಆದೇಶವಾಗಿದ್ದಲ್ಲಿ, ಯಾವುದೇ ವಿಳಂಬವಿಲ್ಲದೆ ಕಾನೂನು ಸಲಹೆ ಪಡೆದು, ಮೇಲ್ಮನವಿ ಸಲ್ಲಿಸಲು ಅಗತ್ಯ ಕ್ರಮಗಳನ್ನು ಜರುಗಿಸುವುದು.

10. ಗುತ್ತಿಗೆ ನೀಡಿರುವ ಸರ್ಕಾರಿ ಜಮೀನುಗಳನ್ನು ಪ್ರಕರಣವಾರು ಪರಾಮರ್ಶಿಸಿ, ಗುತ್ತಿಗೆ ಷರತ್ತುಗಳು ಪಾಲನೆಯಾಗಿರುವ ಬಗ್ಗೆ, ಗುತ್ತಿಗೆ ಹಣ ಕಾಲಕಾಲಕ್ಕೆ ಪಾವತಿಸಿರುವ ಬಗ್ಗೆ, ಗುತ್ತಿಗೆ ಮುಗಿದಿರುವ ಪ್ರಕರಣಗಳಲ್ಲಿ ಸರ್ಕಾರಿ ಜಮೀನು ಹಿಂಪಡೆಯುವ ಬಗ್ಗೆ ಜಿಲ್ಲಾಧಿಕಾರಿಗಳು ಪರಾಮರ್ಶಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು

11. ಭೂ ಮಂಜೂರಾತಿಯಾದ ಪ್ರಕರಣಗಳಲ್ಲಿಯೂ ಸಹ ಮಂಜೂರತಿ ಷರತ್ತು ಮತ್ತು ನಿಬಂಧನೆಗಳು ಪಾಲನೆಯಾಗಿರುವ ಬಗ್ಗೆ ಪರಾಮರ್ಶಿಸಿ, ಉಲ್ಲಂಘನೆಯಾಗಿರುವ ಪ್ರಕರಣಗಳಲ್ಲಿ ಕಾನೂನು ಕ್ರಮಗಳನ್ನು ಜರುಗಿಸುವುದು.

12. ಇದೇ ರೀತಿ ಭೂ ಸುಧಾರಣಾ ಕಾಯಿದೆ ಉಲ್ಲಂಘನೆಯಾಗಿರುವ ಪ್ರಕರಣಗಳನ್ನು ಸಹ ಗುರುತಿಸಿ, ಪರಾಮರ್ಶಿಸಿ ಅಗತ್ಯ ಕಾನೂನು ಕ್ರಮಗಳನ್ನು ಜರುಗಿಸುವುದು.

13. ಒತ್ತುವರಿ ತೆರವು ಮಾಡಿ ಸರ್ಕಾರದ ವಶಕ್ಕೆ ಪಡೆದ ಜಮೀನುಗಳು ಪುನ: ಒತ್ತುವರಿಯಾಗದಂತೆ ಸಂರಕ್ಷಣಾ ಕ್ರಮ ಅಂದರೆ ಸಂದರ್ಭಾನುಸಾರ ಸಾರ್ವಜನಿಕ ಉದ್ದೇಶಕ್ಕೆ ಮೀಸಲಿಟ್ಟು, ಪುನ: ಒತ್ತುವರಿಯಾಗದಂತೆ ತಂತಿ ಬೇಲಿ ಹಾಕಿಸುವುದು, ಸುತ್ತಲೂ ಕಂದಕ ನಿರ್ಮಿಸುವುದು ಅಥವಾ ನಾಮ ಫಲಕ ಹಾಕಿಸುವ ಕಾಮಗಾರಿಗಳನ್ನು ಮಾಡಿಸುವುದು.

14 ದಿನಾಂಕ 02.02.2019ರ ಸುತ್ತೋಲೆಯಂತೆ ಒತ್ತುವರಿದಾರರಿಂದ ದಂಡ ವಸೂಲಿ ಮಾಡಿ, ಸಾಧಿಸಿದ ಪ್ರಗತಿ ಬಗ್ಗೆ ವರದಿ ಸಲ್ಲಿಸುವುದು

15. ಎಲ್ಲಾ ಜಿಲ್ಲಾಧಿಕಾರಿಗಳು ಸರ್ಕಾರಿ ಜಮೀನು ಒತ್ತುವರಿ ತೆರವು ಹಾಗೂ ಮೇಲ್ಕಂಡ ಅಂಶಗಳ ಬಗ್ಗೆ ತಿಂಗಳಿಗೊಮ್ಮೆ ತಪ್ಪದೇ ಪರಾಮರ್ಶಿಸುವುದು.

ಮೇಲ್ಕಂಡ ಸೂಚನೆಗಳನ್ನು ಜಿಲ್ಲಾಧಿಕಾರಿಗಳು ತಪ್ಪದೇ ಪಾಲಿಸತಕ್ಕದ್ದು

(ಎನ್. ಮಂಜುನಾಥ ಪ್ರಸಾದ್)

ಸರ್ಕಾರದ ಪ್ರಧಾನ ಕಾರ್ಯದರ್ಶಿ

ಕಂದಾಯ ಇಲಾಖೆ

ಇವರಿಗೆ :-

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಸದರಿ ಸುತ್ತೋಲೆಯನ್ನು ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ, ಬೆಂಗಳೂರು ಇವರಿಗೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು, ಹಾಗೂ ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡುವ/ ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸುವುದು ಇತ್ಯಾದಿಗಳ ಬಗ್ಗೆ ಸಮನ್ವಯ ಕ್ರಮವಹಿಸಿ ಸರ್ಕಾರಕ್ಕೆ ಪ್ರತಿ ಮಾಹೆ ವರದಿ ಸಲ್ಲಿಸತಕ್ಕದ್ದು.
3. ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ
4 ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ - ಭೂ ಕಬಳಿಕೆಯಂತಹ ಪ್ರಕರಣಗಳು ಕಂಡುಬಂದ ತಕ್ಷಣ ನಿಯಮಾನುಸಾರ ಕ್ರಮವಹಿಸಿ ಕರ್ನಾಟಕ ಭೂ ಕಬಳಿಕೆ ವಿಶೇಷ ನ್ಯಾಯಾಲಯದಲ್ಲಿ ಭೂ ಕಬಳಿಕೆದಾರರ ವಿರುದ್ಧ ಪ್ರಕರಣವನ್ನು ದಾಖಲಿಸಲು ಕ್ರಮವಹಿಸತಕ್ಕದ್ದು.
5. ಎಲ್ಲಾ ಉಪ ವಿಭಾಗಗಳ ಉಪ ವಿಭಾಗಾಧಿಕಾರಿಗಳಿಗೆ (ಜಿಲ್ಲಾಧಿಕಾರಿಗಳ ಮೂಲಕ)
6 ಎಲ್ಲಾ ತಾಲ್ಲೂಕುಗಳ ತಹಸೀಲ್ದಾರರುಗಳಿಗೆ (ಜಿಲ್ಲಾಧಿಕಾರಿಗಳ ಮೂಲಕ)
7 ಹೆಚ್ಚುವರಿ ಪ್ರತಿಗಳು

ಪ್ರತಿಯನ್ನು:

1 ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2 ಎಲ್ಲಾ ಅಪರ/ಉಪ/ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ